**ಕರ್ನಾಟಕ ಸರ್ಕಾರ**
**ಕಾಲೇಜು ಶಿಕ್ಷಣ ಇಲಾಖೆ**

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಶೇಷಾದ್ರಿ ರಸ್ತೆ, ಬೆಂಗಳೂರು-560 001

ಸಂಖ್ಯೆ: ಕಾಶಿಇ/ಶೈವಿ/04/ಸುತ್ತೋಲೆ/2022-23

ದಿನಾಂಕ: 27.02.2024

**ಸುತ್ತೋಲೆ**

**ವಿಷಯ :** ದಿನಾಂಕ: 28.02.2024 ರಂದು "ರಾಷ್ಟ್ರೀಯ ವಿಜ್ಞಾನ ದಿನಾಚರಣೆ" ಅಂಗವಾಗಿ 'ಪ್ರತಿಜ್ಞಾ ವಿಧಿ ಸ್ವೀಕರಿಸುವ' ಬಗ್ಗೆ.

**ಉಲ್ಲೇಖ :** ಸರ್ಕಾರದ ಪತ್ರ ಸಂಖ್ಯೆ: ಉಶಿಸ/ಆಕಾ/124/2024 ದಿನಾಂಕ: 26.02.2024.

********

ಮೇಲ್ಕಂಡ ವಿಷಯಕ್ಕೆ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ಫೆಬ್ರವರಿ 28 2024 ರಂದು **"ರಾಷ್ಟ್ರೀಯ ವಿಜ್ಞಾನ ದಿನಾಚರಣೆ"** ಯ ಸಂದರ್ಭದಲ್ಲಿ ಇಲಾಖಾ ವ್ಯಾಪ್ತಿಯ ಎಲ್ಲಾ ಕಾಲೇಜು ಮತ್ತು ವಿಶ್ವವಿದ್ಯಾಲಯಗಳಲ್ಲಿ ಏಕಕಾಲದಲ್ಲಿ ವೈಜ್ಞಾನಿಕ ಮನೋಭಾವನೆ ಹಾಗೂ ಮಾನವೀಯ ಮೌಲ್ಯಗಳನ್ನು ಮೈಗೂಡಿಸಿಕೊಳ್ಳುವಂತೆ ಪ್ರತಿಜ್ಞಾ ವಿಧಿ ಸ್ವೀಕರಿಸುವ ಬಗ್ಗೆ ಸೂಕ್ತ ಆದೇಶ ಹೊರಡಿಸುವಂತೆ ಉಲ್ಲೇಖಿತ ಪತ್ರದಲ್ಲಿ ತಿಳಿಸಿರುತ್ತಾರೆ.

ಈ ದಿಶೆಯಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನವು ಸಮೃದ್ಧ, ಶಾಂತಿಯುತ, ಪ್ರಗತಿಪರ ಸಮಾಜ ಮತ್ತು ದೇಶ ನಿರ್ಮಾಣದಲ್ಲಿ ಮಹತ್ತರ ಪಾತ್ರವಹಿಸಿದೆ. ಸಮಾಜದಲ್ಲಿ ಶಾಂತಿ ಮತ್ತು ಭ್ರಾತೃತ್ವವನ್ನು ಬೆಸೆಯುವ ಹಿನ್ನೆಲೆಯಲ್ಲಿ ವೈಜ್ಞಾನಿಕ ಮನೋಭಾವದ ನೆಲೆಗಟ್ಟನ್ನು ಸಾರ್ವಜನಿಕರಲ್ಲಿ ಬೆಳೆಸುವುದು ಅತ್ಯಾವಶ್ಯಕವಾಗಿದ್ದು, ಭಾರತದ ಸಂವಿಧಾನದ ಮೂಲಭೂತ ಕರ್ತವ್ಯಗಳಲ್ಲಿ ಇದು ಕೂಡ ಒಂದಾಗಿರುತ್ತದೆ.

ಆದುದರಿಂದ ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳಲ್ಲಿ ದಿ: 28.02.2024 ರಂದು ಪ್ರತಿಜ್ಞಾ ವಿಧಿ ಸ್ವೀಕರಿಸಿ "ರಾಷ್ಟ್ರೀಯ ವಿಜ್ಞಾನ ದಿನಾಚರಣೆ" ಯನ್ನು ಅರ್ಥಪೂರ್ಣವಾಗಿ ಆಚರಿಸುವಂತೆ ಸೂಚಿಸಲಾಗಿದೆ. ( ಪ್ರತಿ ಲಗತ್ತಿಸಿದೆ).

**ಅಡಕ: ಪ್ರತಿಜ್ಞಾ ವಿಧಿ**

27/2/2024
**ಆಯುಕ್ತರು**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

**ಇವರಿಗೆ:**

1) ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

**ಪ್ರತಿಯನ್ನು:**

1) ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ಕೊಠಡಿ ಸಂಖ್ಯೆ: 344/345, 3ನೇ ಮಹಡಿ, ವಿಕಾಸಸೌಧ, ಬೆಂಗಳೂರು- 560001.
2) ಕಛೇರಿ ಪ್ರತಿ.

<u>ಪ್ರತಿಜ್ಞಾ ವಿಧಿ</u>

.................. ಆದ ನಾನು ಭಾರತೀಯ ಸಂವಿಧಾನದ ಮೂಲಭೂತ ಕರ್ತವ್ಯಗಳಲ್ಲೊಂದಾದ 51 (ಎಚ್) ವಿಧಿಯ ಅನ್ವಯ ವೈಜ್ಞಾನಿಕ ಮನೋಭಾವನೆ ಮತ್ತು ವೈಚಾರಿಕತೆಯನ್ನು ಬೆಳೆಸಿಕೊಳ್ಳುತ್ತೇನೆ. ನಾನು ಪ್ರಶ್ನೆ ಮಾಡದೇ ಯಾವುದೇ ತರ್ಕ ಒಪ್ಪುವುದಿಲ್ಲ. ಸಂವಿಧಾನದ ಮೂಲಭೂತ ಕರ್ತವ್ಯದ ಆಶಯದಂತೆ ಮೌಢ್ಯತೆ ಮತ್ತು ಅಂಧಕಾರವನ್ನು ನಿರ್ಮೂಲನೆ ಮಾಡಿ ಸಮಾಜಕ್ಕೆ ಪೂರಕವಾದ ಬದುಕನ್ನು ರೂಪಿಸಿಕೊಳ್ಳುತ್ತೇನೆಂದು ಈ ಮೂಲಕ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ದಿನದಂದು ಪ್ರತಿಜ್ಞೆ ಮಾಡುತ್ತೇನೆ.

ಜೈ ಹಿಂದ್, ಜೈ ಕರ್ನಾಟಕ, ಜೈ ವಿಜ್ಞಾನ